ಶಿವಮೊಗ್ಗ ಕ್ಷೇತ್ರದ ಸರ್ಕಾರಿ ಶಾಲೆಗಳ ದುರಸ್ತಿ

2005(1885) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಹಣವೆಷ್ಟು ?

ಆ) ಇತ್ತೀಚೆಗೆ ಶಿವಮೊಗ್ಗ ನಗರದ ದುರ್ಗಿಗುಡಿ ಪ್ರಾಥಮಿಕ ಶಾಲೆಯ ಆರ್.ಸಿ.ಸಿ.ಯು (ಒಳ ಛಾವಣಿ) ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ದುರಸ್ತಿಗೆ ಕ್ರಮ ಕೈಗೊಂಡಿದೆಯೇ ? (ವಿವರ ನೀಡುವುದು);

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಹಣದ ವಿವರ ಈ ಕೆಳಕಂಡಂತಿದೆ.

(ರೂ. ಲಕ್ಷಗಳಲ್ಲಿ)

ವರ್ಷ	ಪ್ರಾಥಮಿಕ		ಪ್ರೌಢ	
	ಯೋಜನೆ	ಯೋಜನೇತರ	ಯೋಜನೆ	ಯೋಜನೇತರ
2000-01	-	12.10	1.50	-
2001-02	14.40	8.10	-	17.50
ಒಟ್ಟು	**14.40**	**20.20**	**1.50**	**17.50**

ಆ) ಬಂದಿದೆ;

ಸದರಿ ಶಾಲೆಯ ಕೊಠಡಿ ದುರಸ್ತಿಗಾಗಿ ರೂ. 5.78 ಲಕ್ಷಗಳ ಅಂದಾಜು ವೆಚ್ಚದ ಪಟ್ಟಿ ತಯಾರಿಸಿದ್ದು 2002-03ನೇ ಸಾಲಿಗೆ ಯೋಜನೆ / ಯೋಜನೇತರದಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಕ್ರಮ ಕೈಗೊಳ್ಳುವಂತೆ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ತಿಳಿಸಲಾಗಿದೆ.

ರಾಜ್ಯದಲ್ಲಿ ಹೊಸ ಖಾಸಗಿ ಟಿ.ಸಿ.ಎಚ್. ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

2006(1883) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಹೊಸ ಖಾಸಗಿ ಟಿ.ಸಿ.ಹೆಚ್. ಕಾಲೇಜ್ ಪ್ರಾರಂಭಿಸುವ ಬಗ್ಗೆ ಸರ್ಕಾರಕ್ಕೆ ಎಷ್ಟು ಅರ್ಜಿಗಳು ಸಲ್ಲಿಸಲ್ಪಟ್ಟಿರುತ್ತವೆ; ಯಾವಾಗ ಅನುಮತಿ ನೀಡಲಾಗುವುದು? (ವಿವರ ನೀಡುವುದು) ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) 637 ಅರ್ಜಿಗಳು ಸಲ್ಲಿಸಲ್ಪಟ್ಟಿದ್ದು, ವಿಷಯ ಪರಿಶೀಲನೆಯಲ್ಲಿದೆ.

ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಂಥಾಲಯಗಳ ಸ್ಥಾಪನೆ

2007(1880) ಶ್ರೀ ಚಿನ್ನಿಗಪ್ಪ. ಸಿ (ಕೊರಟಗೆರೆ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಹೊಸದಾಗಿ ಮಂಜೂರು ಮಾಡಲಾದ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು);

ಅ) ಗ್ರಂಥಾಲಯದ ಮೇಲ್ವಿಚಾರಕರಿಗೆ ಸರ್ಕಾರವು ನೀಡುತ್ತಿರುವ ಮಾಸಿಕ ವೇತನ ಎಷ್ಟು;

ಇ) ಮಾಸಿಕ ವೇತನವನ್ನು ಹೆಚ್ಚಿಗೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೆ; ಇದಕ್ಕೆ ತಗಲುವ ವೆಚ್ಚ ಎಷ್ಟು?

ಶ್ರೀ ಬಾಬುರಾವ್ ಚಿವ್ಹಾಣ್(ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ಒಂದು

ವಿವರ ಈ ಕೆಳಕಂಡಂತಿದೆ;

2000-2001ನೇ ಸಾಲಿನಲ್ಲಿ	..	1
ನೀಲಗೊಂಡನ ಹಳ್ಳಿ ತಾ: ಕೊರಟಗೆರೆ		
2001-02ನೇ ಸಾಲಿನಲ್ಲಿ	..	ಇಲ್ಲ
2002-03ನೇ ಸಾಲಿನಲ್ಲಿ	..	ಇಲ್ಲ

ಆ) ಮಾಸಿಕ ಗೌರವ ಸಂಭಾವನೆ ರೂ. 750.00

ಇ) ಪರಿಶೀಲನೆಯಲ್ಲಿ ಇದೆ.

ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಶಿಕ್ಷಕರ ಕೊರತೆ

2008(1881) ಶ್ರೀ ಚಿನ್ನಿಗಪ್ಪ.ಸಿ (ಕೊರಟಗೆರೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಯಾವ ಯಾವ ಯೋಜನೆಯಡಿಯಲ್ಲಿ ಹೊಸ ಶಾಲಾ ಕೊಠಡಿಗಳ ನಿರ್ಮಾಣವಾಗಿದೆ; ಇದಕ್ಕೆ ತಗಲಿರುವ ಅಂದಾಜು ವೆಚ್ಚವೆಷ್ಟು ? (ವಿವರ ಒದಗಿಸುವುದು);

ಆ) ತಾಲ್ಲೂಕಿನ ಯಾವ ಯಾವ ಪ್ರಾಥಮಿಕ, ಪ್ರೌಢ, ಪದವೀಪೂರ್ವ ಶಾಲೆ, ಕಾಲೇಜುಗಳಲ್ಲಿ ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; ಐಚ್ಛಿಕ ವಿಷಯಗಳಾವುವು;

ಇ) ಶಿಕ್ಷಕರ ಕೊರತೆಯನ್ನು ನೀಗಿಸಿ ಈ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಪ್ರೊ।। ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಕೊರಟಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ವಿವಿಧ ಯೋಜನೆಯಡಿಯಲ್ಲಿ ನಿರ್ಮಿಸಿದ ಹೊಸ ಶಾಲಾ ಕೊಠಡಿಗಳ ಸಂಖ್ಯೆ 22. ಇದಕ್ಕೆ ತಗಲಿರುವ ಅಂದಾಜು ವೆಚ್ಚ ರೂ. 21.74 ಲಕ್ಷಗಳು.

ಆ) ಕೊರಟಗೆರೆ ತಾಲ್ಲೂಕಿನ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕ, ಶಿಕ್ಷಕಿಯರ ಸಂಖ್ಯೆಗಳ ವಿವರ ಈ ಕೆಳಕಂಡಂತಿದೆ.

2. ಪ್ರೌಢಶಾಲೆ : 14 [ಹಿಂದಿ-3, ಕಲೆ-3, ಪಿ.ಸಿ.ಎಂ-3, ಸಿ.ಬಿ.ಜಡ್-5]

ಪ್ರಾಥಮಿಕ		ಶಿಕ್ಷಕರ ಕೊರತೆ ಇರುವುದಿಲ್ಲ				
ಪ್ರೌಢ ಶಾಲೆಗಳು	ಕ್ರಮ ಸಂಖ್ಯೆ	ಶಾಲೆಯ ಹೆಸರು	ಐಚ್ಛಿಕ ವಿಷಯಗಳು ಹಿಂದಿ	ಸಿ.ಬಿ.ಜಡ್	ಪಿ.ಸಿ.ಎಂ	ಕಲೆ	ಒಟ್ಟು
	01.	ಸ.ಪ್ರೌ.ಶಾ.ಯಲಚಗೆರೆ	01	01	-	01	03
	02.	ಸ.ಪ್ರೌ.ಶಾ.ಗೊಡ್ರಹಳ್ಳಿ	-	-	-	01	01